**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ. ಎಂ. ಎಲ್. ಅನೀಲ್ ಕುಮಾರ್ ರವರು ನಿಯಮ 72 ರಡಿ ಪ್ರಸ್ತಾಪಿಸಿರುವ ವಿಷಯಕ್ಕೆ ಉತ್ತರ**

**ಪ್ರಶ್ನೆ**: ತೋಟಗಾರಿಕಾ ಬೆಳೆಗಳ ಬಿತ್ತನೆ ಬೀಜಗಳ ವಿತರಣೆಯಲ್ಲಿ ಕಳಪೆ ಬೀಜ ತಯಾರಿಸುವ ಕಂಪನಿಗಳು ಮತ್ತು ಕೆಲವು ಬಹು ರಾಷ್ಟ್ರೀಯ ಕಂಪನಿಗಳು ಏಕಸ್ವಾಮ್ಯವನ್ನು ಹೊಂದಿದ್ದು, ರೈತರು ಒಮ್ಮೆ ಇಂತಹ ಕಂಪನಿಗಳಿಂದ ಬಿತ್ತನೆ ಬೀಜಗಳನ್ನು ಖರೀದಿಸಿದ ನಂತರ ಈ ಕಂಪನಿಗಳ ಮಾರ್ಗಸೂಚಿಗಳಂತೆ ವಿಪರೀತ ಗೊಬ್ಬರ ಮತ್ತು ಕೀಟನಾಶಕಗಳನ್ನು ಬಳಸಲೇ ಬೇಕಾದಂತಹ ಅನಿವಾರ್ಯತೆ ಸೃಷ್ಟಿ ಮಾಡಿ ರೈತರಿಗೆ ಅನಾವಶ್ಯಕ ಆರ್ಥಿಕ ಹೊರೆ ಹೊರುವಂತಾಗಿದೆ. ಇಲಾಖೆ ಅಧಿಕಾರಿಗಳು ಸಹ ಇಂತಹ ಕಂಪನಿಗಳ ಗೊಬ್ಬರ ಮತ್ತು ಕೀಟನಾಶಕಗಳನ್ನು ಶಿಫಾರಸ್ಸು ಮಾಡುತ್ತಿರುವುದರಿಂದ ರೈತರು ಸಹ ಅನಿವಾರ್ಯವಾಗಿ ಇದನ್ನು ಖರೀದಿಸಬೇಕಾದ ವಾತಾವರಣ ಸೃಷ್ಟಿ ಮಾಡಿ, ಅಧಿಕ ಗೊಬ್ಬರ ಮತ್ತು ಕೀಟನಾಶಕಗಳ ಬಳಕೆಯಿದ ಮಣ್ಣಿನ ಅನಾರೋಗ್ಯಕ್ಕೆ ಹಾಗೂ ರೈತರ ಆರ್ಥಿಕ ಅವನತಿಗೆ ಕಾರಣವಾಗಿತ್ತಿರುವ ಮತ್ತು ತೋಟಗಾರಿಕಾ ಉತ್ಪನ್ನವನ್ನು ಖರೀದಿಸುವವರ ಆರೋಗ್ಯದ ಮೇಲೆ ಪರಣಾಮ ಬೀರುತ್ತಿರುವುದರ ಕುರಿತು.

**ಉತ್ತರ**: ತೋಟಗಾರಿಕಾ ಬೆಳೆಗಳ ಬಿತ್ತನೆ ಬೀಜಗಳ ಮಾರಾಟದಲ್ಲಿ ತೊಡಗಿರುವ ಕಂಪನಿ ಹಾಗೂ ಬಹು ರಾಷ್ಟ್ರೀಯ ಕಂಪನಿಗಳು ಸರಬರಾಜು ಮಾಡುವ ಬೀಜದ ಗುಣಮಟ್ಟದಲ್ಲಿ ಲೋಪದೋಷ ಕಂಡು ಬಂದಲ್ಲಿ ನಿಯಾಮಾನುಸಾರ ಅಂತಹ ಕಂಪನಿ/ವಿತರಕರ ಮೇಲೆ ಕ್ರಮ ವಹಿಸಲಾಗುವುದು.

ಗೊಬ್ಬರ ಮತ್ತು ಕೀಟನಾಶಕಗಳ ಬಳಕೆ ಕುರಿತು ಖಾಸಗಿ ಕಂಪನಿಗಳು ನೀಡುತ್ತಿರುವ ಮಾರ್ಗಸೂಚಿಯಂತೆ ಇಲಾಖೆ ಅಧಿಕಾರಿಗಳಿಂದ ಶಿಫಾರಸ್ಸು ಮಾಡಲಾಗುತ್ತಿಲ್ಲ. ತೋಟಗಾರಿಕೆ ವಿಶ್ವವಿದ್ಯಾಲಯ ಹಾಗೂ ಭಾರತೀಯ ತೋಟಗಾರಿಕೆ ಸಂಶೋಧನಾ ಸಂಸ್ಥೆಗಳು ನೀಡುವ ಸಲಹೆ ಮೇರೆಗೆ ವಿವಿಧ ತೋಟಗಾರಿಕೆ ಬೆಳೆಗಳ ಗೊಬ್ಬರ ಹಾಗೂ ಕೀಟನಾಶಕ ಬಳಕೆ ಬಗ್ಗೆ ಮಾಹಿತಿಯನ್ನು ನೀಡಲಾಗುತ್ತದೆ.

ಮುಂದುವರೆದು, ಅವೈಜ್ಞಾನಿಕವಾಗಿ ರಾಸಾಯನಿಕ ರಸಗೊಬ್ಬರಗಳು ಹಾಗೂ ಪೀಡೆನಾಶಕಗಳ ಬಳಕೆಯಿಂದ ಮಣ್ಣಿನ ಫಲವತ್ತತೆಯ ಮೇಲೆ ಪರಿಣಾಮ ಬೀರುತ್ತದೆ. ಈ ನಿಟ್ಟಿನಲ್ಲಿ ಮಣ್ಣಿನ ಫಲವತ್ತತೆ ಮತ್ತು ಬೆಳೆ ಉತ್ಪಾದನೆಯನ್ನು ಸುಧಾರಿಸಲು, ರಸಗೊಬ್ಬರಗಳು ವೈಜ್ಞಾನಿಕ ಬಳಕೆ ಹಾಗೂ ಶಿಫಾರಸ್ಸು ಮಾಡಲಾದ ಪೀಡೆನಾಶಕಗಳನ್ನು ಮಾತ್ರ ಬಳಕೆ ಮಾಡಲು ಇಲಾಖೆಯ ತಾಂತ್ರಿಕ ಸಿಬ್ಬಂದಿವತಿಯಿಂದ, ಕೃಷಿ ಹಾಗೂ ತೋಟಗಾರಿಕೆ ವಿಶ್ವವಿದ್ಯಾಲಯಗಳ ವಿಜ್ಞಾನಿಗಳಿಂದ ರೈತರಿಗೆ ಮಾಹಿತಿಯನ್ನು ಒದಗಿಸಲಾಗುತ್ತಿದೆ. ರೈತರಿಗೆ ತೋಟಗಾರಿಕೆ ಪರಿಕರಗಳಾದ ಬಿತ್ತನೆ ಬೀಜ/ರಸಗೊಬ್ಬರ/ ಕೀಟನಾಶಕಗಳನ್ನು ಅಧಿಕೃತ ಮಾರಾಟಗಾರರಿಂದ ಮಾತ್ರ ಖರೀದಿ ಮಾಡಲು ಮತ್ತು ಖರೀದಿಸಿದ ಪರಿಕರಗಳಿಗೆ ಕಡ್ಡಾಯವಾಗಿ ರಸೀದಿಯನ್ನು ಪಡೆಯಲು ಮಾಹಿತಿಯನ್ನು ನೀಡಲಾಗುತ್ತಿದೆ.

HORTI 310 HGM 2024

**(ಎಸ್.ಎಸ್.ಮಲ್ಲಿಕಾರ್ಜುನ್)**
ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಸಚಿವರು

ಎಸ್.ಎಸ್. ಮಲ್ಲಿಕಾರ್ಜುನ್
ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಸಚಿವರು
ಹಾಗೂ ದಾವಣಗೆರೆ ಜಿಲ್ಲೆ ಉಸ್ತುವಾರಿ ಸಚಿವರು